ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ಜಿಲ್ಲಾ ನ್ಯಾಯಾಲಯವನ್ನು ಪ್ರಾರಂಭಿಸುವ ಕುರಿತು.

೨೧೨೯(೨೬೯೧)

ಶ್ರೀ ಕರಡಿ ಸಂಗಣ್ಣ ಅಮರಪ್ಪ(ಕೊಪ್ಪಳ): ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರದಲ್ಲಿ ಜಿಲ್ಲಾ ನ್ಯಾಯಾಲಯ ಪ್ರಾರಂಭಿಸುವ ಯೋಜನೆ ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಸದರಿ ನ್ಯಾಯಾಲಯವನ್ನು ಎಂದು ಪ್ರಾರಂಭಿಸಲಾಗುವುದು.

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು):

ಅ) ಹೌದು ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಸ್ಥಾಪಿಸಲು ಮಂಜೂರಾತಿ ನೀಡಿದೆ. ಆದೇಶ ಸಂಖ್ಯೆ: ಲಾ ೧೮ ಎಲ್‌ಸಿಇ ೯೭(ಭಾಗ) ದಿನಾಂಕ:೨೦-೪-೨೦೦೦ ಹೊರಡಿಸಲಾಗಿದೆ.

ಬೆಂಗಳೂರು ನಗರದಲ್ಲಿರುವ ಮದರ್ ಡೈರಿ ಬೂತ್‌ಗಳ ಬಗ್ಗೆ.

೨೧೩೦(೨೭೦೯)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಪಶುಸಂಗೋಪನ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಮದರ್ ಡೇರಿ ಹಾಲಿನ ಬೂತ್‌ಗಳೆಷ್ಟು?

ಆ) ಶಿವಾಜಿ ನಗರ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಬೂತ್‌ಗಳಿವೆ;

ಇ) ಈ ಬೂತ್‌ಗಳಲ್ಲಿರುವ ನಾಣ್ಯ ಹಾಕಿ ಹಾಲನ್ನು ಪಡೆದುಕೊಳ್ಳುವ ಯಂತ್ರಗಳು ಕೆಟ್ಟು ಹೋಗಿದ್ದು ಹಾಲನ್ನು ಬಕೇಟ್‌ನಲ್ಲಿಟ್ಟುಕೊಂಡು ಅಳತೆ ಮಾಡಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಇದರಿಂದ ಬೆರಕೆ ಹಾಲು ಜನತೆಗೆ ಲಭ್ಯವಾಗುತ್ತಿರುವುದು ನಿಜವಲ್ಲವೆ?

ಉ) ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎ ಕೃಷ್ಣಪ್ಪ(ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು):

ಅ) ೧೨೦(ಒಂದು ನೂರ ಇಪ್ಪತ್ತು)

ಆ) ೨. (ಎರಡು)

ಇ) ಹೌದು, ಆದರೆ ವಿದ್ಯುತ್ ನಿಲುಗಡೆ ಸಮಯದಲ್ಲಿ 'ವಿದ್ಯುತ್' ಏರುಪೇರು ಆದ ಸಂದರ್ಭದಲ್ಲಿ ಹಾಗೂ ಈ ಯಂತ್ರಗಳು ಕೆಟ್ಟು ಹೋದ ಸಂದರ್ಭಗಳಲ್ಲಿ ಗ್ರಾಹಕರಿಗೆ ಹಾಲನ್ನು ವಿತರಿಸಲು ತೊಂದರೆಯಾಗದಂತೆ ತಾತ್ಕಾಲಿಕ ವ್ಯವಸ್ಥೆಗಾಗಿ ಕೈಯಲ್ಲಿ ಅಳೆದು ಮಾರಾಟ ಮಾಡುವ ಪ್ರಸಂಗಗಳು ಇರುತ್ತವೆ. ಈ ಯಂತ್ರಗಳು ಕೆಟ್ಟು ಹೋಗಿರುವ ಬಗ್ಗೆ ಅಥವಾ ಕಾರ್ಯಾಚರಣೆ ಮಾಡದೇ ಇರುವ ಬಗ್ಗೆ ದೂರುಗಳು ಬಂದ ತಕ್ಷಣವೇ ತುರ್ತಾಗಿ ದುರಸ್ತಿ ಮಾಡಿಸುವ ವ್ಯವಸ್ಥೆ ಇದೆ.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ

ಕಂಠೀರವ ಕ್ರೀಡಾಂಗಣದ ಪಕ್ಕದಲ್ಲಿ ವಿದ್ಯುತ್ ಉಪಕೇಂದ್ರ ಸ್ಥಾಪನೆ.

೨೧೩೧(೨೭೧೦)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀ ಕಂಠೀರವ ಕ್ರೀಡಾಂಗಣದ ಪಕ್ಕದಲ್ಲಿ ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸಲು ಕ್ರೀಡಾ ಮತ್ತು ಯುವಜನ ಸೇವಾ ಇಲಾಖೆ ಸ್ಥಳವನ್ನು ನೀಡಿದೆಯೇ?

ಆ) ಹಾಗಿಲ್ಲದಿದ್ದಲ್ಲಿ ಈ ಕೇಂದ್ರವನ್ನು ಸ್ಥಾಪಿಸಲು ಬೇಕಾಗುವ ಸ್ಥಳವನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

Sri. S.S.MALLIKARJUNA(Minister of state for Youth Services and Sports):

ಅ) ಇಲ್ಲ.